ವಿಷಯ : – ಮುಂಡರಗಿ ತಾಲ್ಲೂಕಿನಲ್ಲಿರುವ ವಿಜಯನಗರ ಮಾಧ್ಯಮಿಕ ಶಾಲೆಗೆ ಅನುದಾನ ಬಿಡುಗಡೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 273(572)

ಶ್ರೀ ಕೆ.ಹೆಚ್.ಕುರಡಗಿ(ಮುಂಡರಗಿ)

ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ)ಮುಂಡರಗಿ ತಾಲ್ಲೂಕಿನಲ್ಲಿರುವ ವಿಜಯನಗರ ಮಾಧ್ಯಮಿಕ ಶಾಲೆಯನ್ನು ಪ್ರಾರಂಭಿಸಿ 10-12 ವರ್ಷಗಳಾದರೂ ಇದಕ್ಕೆ ಅನುದಾನ ಬಿಡುಗಡೆ ಮಾಡದಿರುವುದು ನಿಜವೇ;

ಆ) ಹಾಗಿದ್ದಲ್ಲಿ ಯಾವಾಗ ಅನುದಾನವನ್ನು ಬಿಡುಗಡೆ ಮಾಡಲಾಗುವುದು;

ಶ್ರೀಮತಿ. ನಾಗಮ್ಮ ಸಿ.ಕೇಶವಮೂರ್ತಿ

(ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು)

ಹೌದು.

ಸದರಿ ಶಾಲೆಯು ಸಿಬ್ಬಂದಿ ನೇಮಕಾತಿಯಲ್ಲಿ ಮೀಸಲಾತಿ ನಿಯಮ ಉಲಂಘಿಸಿದೆ. ಈ ಪ್ರಕರಣವನ್ನು 59 ಇಂತಹದೇ ಪ್ರಕರಣಗಳ ಜೊತೆಗೆ ಡಾ.ನಾಗರಾಜ್ ಸಮಿತಿಗೆ ಒಪ್ಪಿಸಲಾಗಿದೆ. ಅಲ್ಲಿಂದ ವರದಿ ಬಂದ ಮೇಲೆ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು.

ವಿಷಯ : – ಮುಂಡರಗಿ ಮತ್ತು ಗದಗ್ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 274(573)

ಶ್ರೀ ಕೆ.ಹೆಚ್.ಕುರಡಗಿ(ಮುಂಡರಗಿ)

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ)ಮುಂಡರಗಿಯ ಮತ್ತು ಗದಗ್ ತಾಲ್ಲೂಕಿನಲ್ಲಿ ಶಿಕ್ಷಕರ ಕೊರತೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದರೆ ಅದರ ಬಗ್ಗೆ ಕೈಗೊಂಡ ಕ್ರಮವೇನು?

ಆ) ಈಗಿನ ಮಕ್ಕಳ ಗಣತಿ ಪ್ರಕಾರ ಶಿಕ್ಷಕರ ಕೊರತೆ ಇದೆಯೇ, ಹಾಗಿದ್ದಲ್ಲಿ ಎಷ್ಟು? ಅವುಗಳನ್ನು ತುಂಬಲು ಕೈಗೊಳ್ಳಲಾಗಿರುವ ಕ್ರಮಗಳೇನು?

ಇ) ಮುಂಡರಗಿ ಮತ್ತು ಮುಳಗುಂದದ ಪುರಸಭೆ ಸರಹದ್ದಿನಲ್ಲಿ ಶಾಲೆಯ ಕೊಠಡಿಗಳು ಕಡಿಮೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ ಆ ಬಗ್ಗೆ ಕೈಗೊಳ್ಳಲಾಗಿರುವ ಕ್ರಮಗಳೇನು?

ಶ್ರೀಮತಿ. ನಾಗಮ್ಮ ಸಿ.ಕೇಶವಮೂರ್ತಿ

(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಬಂದಿದೆ. ಮುಂಡರಗಿ ತಾಲ್ಲೂಕಿನಲ್ಲಿ ೭೬ ಮತ್ತು ಗದಗ್‌ನಲ್ಲಿ ೨೫ ಹುದ್ದೆಗಳು ಖಾಲಿ ಇವೆ. ವಿಶೇಷ ನೇಮಕಾತಿ ನಿಯಮಗಳಡಿಯಲ್ಲಿ ಗದಗ್ ತಾಲ್ಲೂಕಿನಲ್ಲಿ ಆರು ಶಿಕ್ಷಕರನ್ನು ಈಗಾಗಲೇ ನೇಮಕ ಮಾಡಲಾಗಿದೆ. ಮುಂಡರಗಿ ತಾಲ್ಲೂಕಿನಲ್ಲಿ 18 ಶಿಕ್ಷಕರನ್ನು ನೇಮಕಾತಿ ಮಾಡಲಾಗುತ್ತಿದೆ.

ಹೌದು. ಗದಗ್ ಮತ್ತು ಮುಂಡರಗಿ ತಾಲ್ಲೂಕಿನಲ್ಲಿ ಕ್ರಮವಾಗಿ 19 ಮತ್ತು 11 ಶಿಕ್ಷಕರ ಕೊರತೆ ಇದೆ. ಮುಂದಿನ ನೇಮಕಾತಿಯಲ್ಲಿ ಅವುಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.